ಕರ್ನಾಟಕ ವಿಧಾನ ಸಭೆ, ಸಚಿವಾಲಯ ಸಂಶೋಧನಾ ಮತ್ತು ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ಟಿಪ್ಪಣಿಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ ಸುದ್ದಿ ಸಮಾಚಾರ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ ದಿನಾಂಕ : DATE : 24/07/2019

ಎನ್.ಮಹೇಶ್‌ಗೆ ಅಮಾನತು ಶಿಕ್ಷೆ

ಬೆಂಗಳೂರು: ಅತ್ತ ಕುಮಾರಸ್ವಾಮಿ ನೇತೃತ್ವದ ಸರ್ಕಾರವು ವಿಶ್ವಾಸಮತದಲ್ಲಿ ಸೋಲುತ್ತಿದ್ದಂತೆ, ಇತ್ತ ವಿಶ್ವಾಸಮತದ ಪೇಚಿಗೆ ಗುರಾಗಿದ್ದ ಬಿಎಸ್‌ಪಿ ಶಾಸಕ ಎನ್.ಮಹೇಶ್ ಅವರನ್ನು ಪಕ್ಷದಿಂದ ಅಮಾನತು ಮಾಡಿ ಬಿಎಸ್‌ಪಿ ಅಧಿನಾಯಕಿ ಮಾಯಾವತಿ ಆದೇಶ ಹೊರಡಿಸಿದ್ದಾರೆ. ಶಾಸಕ ಎನ್. ಮಹೇಶ್ ಅವರು ವಿಶ್ವಾಸಮತ ಯಾಚನೆ ವೇಳೆ ಪಾಲ್ಗೊಳ್ಳದಿರಲು ಮತ್ತು ಪಕ್ಷದ ನಿರ್ದೇಶನವನ್ನು ಉಲ್ಲಂಘಿಸುವ ಮೂಲಕ ಅಶಿಸ್ತು ತೋರಿದ್ದಾರೆ. ಪಕ್ಷವು ಇದನ್ನು ಗಂಭೀರವಾಗಿ ಪರಿಗಣಿಸಿದ್ದು ತಕ್ಷಣದಿಂದಲೇ ಅವರನ್ನು ಅಮಾನತು ಮಾಡಿದೆ ಎಂದು ಮಾಯಾವತಿ ಅವರು ಟ್ವೀಟ್ ಮಾಡಿದ್ದಾರೆ.